# ಪೌಲನು ತಿಮೊಥೇಯನಿಗೆ ಬರೆದ
# ಮೊದಲನೆಯ ಪತ್ರ

## ಮುನ್ನುಡಿ

ತಿಮೊಥೇಯ ಎಂಬವನು ಅಂದಿನ 'ಏಷ್ಯಾ ಮೈನರ್' ಸೀಮೆಗೆ ಸೇರಿದ ಲುಸ್ತ್ರ ಎಂಬ ಪಟ್ಟಣದ ಯುವಕ. ಅವನ ತಂದೆ ಗ್ರಿಕನು, ತಾಯಿಯಾದರೋ ಯೆಹೂದ್ಯಳು. ಶುಭಸಂದೇಶದ ಪ್ರಚಾರ ಕಾರ್ಯದಲ್ಲಿ ಪೌಲನಿಗೆ ಈತನು ಸಂಗಾತಿಯೂ ಸಹಾಯಕನೂ ಆಗಿದ್ದನು.

ತಿಮೊಥೇಯನಿಗೆ ಪೌಲನು ಬರೆದ ಈ ಮೊದಲನೆಯ ಪತ್ರದಲ್ಲಿ ಮೂರು ಮುಖ್ಯಾಂಶಗಳನ್ನು ಗಮನಿಸಬಹುದು:

ಮೊದಲನೆಯದಾಗಿ, ಕ್ರೈಸ್ತಸಭೆಯಲ್ಲಿ ಅಬದ್ಧ ಬೋಧನೆ ಮಾಡುವುದನ್ನು ನಿಲ್ಲಿಸಬೇಕೆಂದು ಈ ಪತ್ರ ಕೆಲವರಿಗೆ ಎಚ್ಚರಿಕೆಯನ್ನು ನೀಡುತ್ತದೆ. ಯೆಹೂದ್ಯ ಹಾಗೂ ಇನ್ನಿತರ ಧಾರ್ಮಿಕ ತತ್ವಗಳಿಂದ ಮಿಶ್ರಣವಾಗಿದ್ದ ಈ ಬೋಧನೆ ಕ್ರೈಸ್ತವಿಶ್ವಾಸಿಗಳಿಗೆ ಗೊಂದಲವನ್ನುಂಟುಮಾಡಿತ್ತು. 'ಭೌತಿಕವಾದ ಈ ಜಗತ್ತು ಕೆಟ್ಟದ್ದು; ಜೀವೋದ್ಧಾರ ಹೊಂದಬೇಕಾದರೆ ಮಾನವನಿಗೆ ಕೆಲವು ರಹಸ್ಯ ವಿಷಯಗಳ ವಿಶಿಷ್ಟ ಅರಿವು ಅಗತ್ಯ; ಕೆಲವು ಆಹಾರಪದಾರ್ಥಗಳ ಸೇವನೆ ನಿಷಿದ್ಧ; ವಿವಾಹವು ನಿಷಿದ್ಧ,' ಎಂದೆಲ್ಲಾ ಬೋಧನೆಯಾಗುತ್ತಿತ್ತು. ಲೇಖಕನು ಇಂಥ ಬೋಧನೆ ಸರಿಯಲ್ಲವೆನ್ನುತ್ತಾನೆ.

ಎರಡನೆಯದಾಗಿ, ಕ್ರೈಸ್ತಸಭೆಯಲ್ಲಿ ಆರಾಧನೆ ಹಾಗೂ ಆಡಳಿತದ ಬಗ್ಗೆ ಕೆಲವು ಸೂಕ್ತ ಸಲಹೆಗಳನ್ನು ಈ ಪತ್ರ ನೀಡುತ್ತದೆ. ಸಭಾ ಪ್ರಮುಖರು ಹಾಗೂ ಅವರ ಸಹಾಯಕರು ಅನುಸರಿಸಬೇಕಾದ ರೀತಿ ನೀತಿಗಳನ್ನೂ ಉಲ್ಲೇಖಿಸುತ್ತದೆ.

ಕೊನೆಯದಾಗಿ, ತಿಮೊಥೇಯನು ಕ್ರಿಸ್ತಯೇಸುವಿನ ಪ್ರಾಮಾಣಿಕ ಸೇವಕನಾಗಿರಬೇಕು; ಕ್ರೈಸ್ತವಿಶ್ವಾಸಿಗಳ ಬಗ್ಗೆ ಜವಾಬ್ದಾರಿಯುತನಾಗಿ ನಡೆದುಕೊಳ್ಳಬೇಕು ಎಂದು ಉಪದೇಶ ನೀಡುತ್ತದೆ.

**ಪರಿವಿಡಿ**

| | | |
|---|---|---|
| ಪೀಠಿಕೆ | – | 1.1 – 1.12 |
| ಕ್ರೈಸ್ತಸಭೆಯ ಹಾಗೂ ಅಧಿಕಾರಿಗಳ ರೀತಿನೀತಿ | – | 1.13 – 3.16 |
| ತಿಮೋಥೇಯನಿಗೆ ಬುದ್ಧಿವಾದ | – | 4.1 – 6.21 |

### ಪೀಠಿಕೆ

**1** ಕ್ರೈಸ್ತವಿಶ್ವಾಸದಲ್ಲಿ ಸತ್‍ಪುತ್ರನಾದ ತಿಮೊಥೇಯನಿಗೆ – ಪೌಲನು ಬರೆಯುವ ಪತ್ರ. [2]ನಮ್ಮ
ಉದ್ಧಾರಕರಾದ ದೇವರ ಮತ್ತು ನಮ್ಮ ನಿರೀಕ್ಷೆಯಾಗಿರುವ ಕ್ರಿಸ್ತಯೇಸುವಿನ ಆಜ್ಞಾನುಸಾರ, ನಾನು
ಕ್ರಿಸ್ತಯೇಸುವಿನ ಪ್ರೇಷಿತನಾಗಿದ್ದೇನೆ. ಪಿತನಾದ ದೇವರೂ ನಮ್ಮ ಪ್ರಭುವಾದ ಕ್ರಿಸ್ತಯೇಸುವೂ ನಿನಗೆ
ಕೃಪೆಯನ್ನೂ ಕರುಣೆಯನ್ನೂ ಶಾಂತಿಯನ್ನೂ ಅನುಗ್ರಹಿಸಲಿ !

### ಸುಳ್ಳುಬೋಧಕರ ಬಗ್ಗೆ ಎಚ್ಚರಿಕೆ

3 ನಾನು ಮಕೆದೋನಿಯಕ್ಕೆ ಹೋಗುವಾಗ ನಿನಗೆ ಹೇಳಿದಂತೆ, ನೀನು ಎಫೆಸದಲ್ಲಿಯೇ ಇರಬೇಕು.
ಇಲ್ಲಿ ಕೆಲವರು ತಪ್ಪು ಬೋಧನೆಯನ್ನು ಮಾಡುತ್ತಿದ್ದಾರೆ; ಅದನ್ನು ನೀನು ನಿಲ್ಲಿಸಬೇಕು. [4]ಕಟ್ಟುಕತೆಗಳಲ್ಲೂ
ಕೊನೆಮೊದಲಿಲ್ಲದ ವಂಶಾವಳಿಗಳ ನಿರೂಪಣೆಗಳಲ್ಲೂ ಕಾಲಹರಣ ಮಾಡಬಾರದೆಂದು ಅವರಿಗೆ

ಆಜ್ಞಾಪಿಸಬೇಕು. ಅಂಥ ಕತೆಗಳು, ವಂಶಾವಳಿಗಳು ಅನಗತ್ಯವಾದ ವಾದವಿವಾದಗಳಿಗೆ ಎಡೆ ಮಾಡುತ್ತವೆಯೇ ಹೊರತು ದೇವರ ಯೋಜನೆ ಕೈಗೂಡಲು ಅವು ಅನುಕೂಲವಾಗಿಲ್ಲ; ವಿಶ್ವಾಸದಿಂದ ಮಾತ್ರ ಅದು ಸಾಧ್ಯ. [5]ನಿರ್ಮಲ ಹೃದಯ, ಶುದ್ಧ ಮನಸ್ಸಾಕ್ಷಿ ಹಾಗೂ ನಿಷ್ಕಪಟ ವಿಶ್ವಾಸದಿಂದ ಹುಟ್ಟುವ ಪ್ರೀತಿಯು ವೃದ್ಧಿಯಾಗಬೇಕೆಂಬುದೇ ವಾಕ್ಯೋಪದೇಶದ ಉದ್ದೇಶ. [6]ಕೆಲವರಾದರೋ ಈ ಮಾರ್ಗವನ್ನು ಬಿಟ್ಟು ವ್ಯರ್ಥವಾದ ವಾದವಿವಾದಗಳಲ್ಲಿಯೇ ಕಾಲಹರಣ ಮಾಡುತ್ತಿದ್ದಾರೆ; [7]ತಮ್ಮ ಮಾತಿನ ಅರ್ಥವಾಗಲಿ, ತಮ್ಮ ವಾದದ ತಿರುಳಾಗಲಿ ಅವರಿಗೆ ತಿಳಿಯದಿದ್ದರೂ ಅವರು ಧರ್ಮೋಪದೇಶಕರಾಗಲು ಹವಣಿಸುತ್ತಾರೆ.

8 ನಮಗೆಲ್ಲರಿಗೂ ತಿಳಿದಿರುವಂತೆ ಧರ್ಮಶಾಸ್ತ್ರವೇನೋ ಒಳ್ಳೆಯದು. ಆದರೆ ಅದನ್ನು ನಿಷ್ಠೆಯಿಂದ ಕಾರ್ಯಗತ ಮಾಡಬೇಕು. [9]ಧರ್ಮಶಾಸ್ತ್ರದ ನಿರ್ಬಂಧನೆಗಳು ಸಜ್ಜನರಿಗಲ್ಲ; ಬದಲಿಗೆ ಅಕ್ರಮಿಗಳಿಗೆ, ಅವಿಧೇಯರಿಗೆ, ಅಧರ್ಮಿಗಳಿಗೆ, ಭಕ್ತಿಹೀನರಿಗೆ, ಪಾಪಿಗಳಿಗೆ, ಅಶುದ್ಧರಿಗೆ, ಪ್ರಾಪಂಚಿಕರಿಗೆ, ಹೆತ್ತವರನ್ನು ಹತ್ಯೆಮಾಡುವವರಿಗೆ ಮತ್ತು ಕೊಲೆಗಾರರಿಗೆ. [10]ಅಂತೆಯೇ, ಕಾಮುಕರಿಗೆ, ಸಲಿಂಗ ಪ್ರೇಮಿಗಳಿಗೆ, ನರಚೋರರಿಗೆ, ಸುಳ್ಳುಸಾಕ್ಷಿಗಳಿಗೆ, ಸುಳ್ಳಾಣೆ ಇಡುವವರಿಗೆ ಮತ್ತು ಸದ್ಧರ್ಮ ವಿರೋಧಿಗಳಿಗೆ ಮುಂತಾದವರಿಗೆ ಈ ನಿರ್ಬಂಧನೆಗಳು ನೇಮಕವಾಗಿವೆ.

11 ಸ್ತುತ್ಯಾರ್ಹರೂ ಮಹಿಮಾಭರಿತರೂ ಆದ ದೇವರು ನನಗೆ ವಹಿಸಿರುವ ಶುಭಸಂದೇಶಕ್ಕೆ ಈ ಬೋಧನೆ ಅನುಗುಣವಾಗಿದೆ.

### ಕರುಣಾಳು ದೇವರು

12 ಶುಭಸಂದೇಶದ ಸೇವೆಯನ್ನು ಕೈಗೊಳ್ಳಲು ಯೋಗ್ಯನೆಂದು ಎಣಿಸಿ ನನಗೆ ಬೇಕಾದ ಶಕ್ತಿಸಾಮರ್ಥ್ಯವನ್ನು ದಯಪಾಲಿಸಿದ ನಮ್ಮ ಪ್ರಭು ಯೇಸುಕ್ರಿಸ್ತರಿಗೆ ನಾನು ಕೃತಜ್ಞತೆಯನ್ನು ಸಲ್ಲಿಸುತ್ತೇನೆ. [13]ಹಿಂದೆ ನಾನು ಅವರನ್ನು ದೂಷಿಸಿದೆ, ಹಿಂಸಿಸಿದೆ, ಅವಮಾನಪಡಿಸಿದೆ. ಆದರೆ ದೇವರು ದಯಾಮಯಿ; ಆಗ ನಾನು ತಿಳಿಯದೆ ಅವಿಶ್ವಾಸಿಯಾಗಿ ಹಾಗೆ ಮಾಡಿದ್ದರಿಂದ ದೇವರು ನನಗೆ ಕರುಣೆತೋರಿದರು. [14]ಕ್ರಿಸ್ತ ಯೇಸುವಿನ ಅನ್ಯೋನ್ಯತೆಯಿಂದ ಲಭಿಸುವ ಪ್ರೀತಿ ವಿಶ್ವಾಸದಲ್ಲಿ ಭಾಗಿಯಾಗುವಂತೆ ಅವರು ನನ್ನ ಮೇಲೆ ತಮ್ಮ ಕೃಪಾವರಗಳನ್ನು ಹೇರಳವಾಗಿ ಸುರಿಸಿದರು. [15]ಕ್ರಿಸ್ತಯೇಸು, ಪಾಪಿಗಳ ಉದ್ಧಾರಕ್ಕಾಗಿ ಈ ಲೋಕಕ್ಕೆ ಬಂದರು ಎನ್ನುವ ಮಾತು ಸತ್ಯವಾದುದು, ನಂಬಲರ್ಹವಾದುದು ಹಾಗೂ ಎಲ್ಲರ ಅಂಗೀಕಾರಕ್ಕೆ ಯೋಗ್ಯವಾದುದು. ಅಂಥ ಪಾಪಿಗಳಲ್ಲಿ ನಾನೇ ಪ್ರಮುಖನು. [16]ಇದರಿಂದಾಗಿ, ಮುಂದೆ ವಿಶ್ವಾಸಿಗಳಾಗಿ ನಿತ್ಯಜೀವ ಪಡೆಯುವವರಿಗೆ ಆದರ್ಶ ದೊರಕುವಂತೆ ಕ್ರಿಸ್ತ ಯೇಸು ನನಗೆ ಪೂರ್ಣ ಸಹನೆ ತೋರಿದರು. ಇದು ದೇವರ ಕರುಣೆಯೇ ಸರಿ. [17]ಸರ್ವಯುಗಗಳ ಅರಸರೂ ಅಮರರೂ ಅಗೋಚರರೂ ಆಗಿರುವ ಏಕೈಕ ದೇವರಿಗೆ ಯುಗಯುಗಾಂತರಕ್ಕೂ ಗೌರವವೂ ಮಹಿಮೆಯೂ ಸಲ್ಲಲಿ ! ಆಮೆನ್.

18 ತಿಮೊಥೇಯನೇ, ನನ್ನ ಕುಮಾರನೇ, ಹಿಂದೆ ನಿನ್ನ ಕುರಿತು ಮಾಡಲಾಗಿರುವ ಪ್ರವಾದನೆಗಳಿಗೆ ಅನುಗುಣವಾಗಿ ನಾನು ನಿನಗೆ ಕೊಡುವ ಆಜ್ಞೆ ಇದು: ಪ್ರವಾದನೆಗಳಿಂದ ಪ್ರೇರಣೆ ಪಡೆದು ದಿಟ್ಟ ಹೋರಾಟವನ್ನು ಮಾಡು. [19]ವಿಶ್ವಾಸವನ್ನೂ ಒಳ್ಳೆಯ ಮನಸ್ಸಾಕ್ಷಿಯನ್ನೂ ಸುರಕ್ಷಿತವಾಗಿ ಇಟ್ಟುಕೋ. ಕೆಲವರು ತಮ್ಮ ಮನಸ್ಸಾಕ್ಷಿಗೆ ವ್ಯತಿರಿಕ್ತವಾಗಿ ನಡೆದು ವಿಶ್ವಾಸವನ್ನೇ ಕಳೆದುಕೊಂಡಿದ್ದಾರೆ. [20]ಹುಮೆನಾಯನೂ ಅಲೆಗ್ಸಾಂಡರನೂ ಇದಕ್ಕೆ ನಿದರ್ಶನವಾಗಿದ್ದಾರೆ. ದೇವದೂಷಣೆ ಮಾಡಬಾರದೆಂಬುದನ್ನು ಕಲಿತುಕೊಳ್ಳುವಂತೆ ಇವರನ್ನು ನಾನು ಸೈತಾನನ ವಶಕ್ಕೆ ಒಪ್ಪಿಸಿಬಿಟ್ಟಿದ್ದೇನೆ.

### ಸಾರ್ವತ್ರಿಕ ಪ್ರಾರ್ಥನೆ

**2** ಮೊತ್ತಮೊದಲು ಮಾನವರೆಲ್ಲರಿಗೋಸ್ಕರ ದೇವರಿಗೆ ವಿಜ್ಞಾಪನೆ, ಪ್ರಾರ್ಥನೆ, ಬಿನ್ನಹ ಹಾಗೂ ಕೃತಜ್ಞತಾಸ್ತುತಿಗಳನ್ನು ಸಲ್ಲಿಸಬೇಕೆಂದು ಕೇಳಿಕೊಳ್ಳುತ್ತೇನೆ. [2]ನಾವು ದೈವಭಕ್ತಿಯುಳ್ಳವರಾಗಿ ಮತ್ತು ಗೌರವಯುತರಾಗಿ ಶಾಂತಿ ಸಮಾಧಾನದಿಂದಲೂ ನೆಮ್ಮದಿಯಿಂದಲೂ ಜೀವಿಸಲು ಅನುಕೂಲವಾಗುವಂತೆ ಅರಸರಿಗಾಗಿಯೂ ಎಲ್ಲಾ ಅಧಿಕಾರಿಗಳಿಗಾಗಿಯೂ ಪ್ರಾರ್ಥಿಸಬೇಕು. [3]ಹೀಗೆ ಮಾಡುವುದು ಒಳ್ಳೆಯದು,

ನಮ್ಮ ಉದ್ಧಾರಕರಾದ ದೇವರಿಗೆ ಮೆಚ್ಚುಗೆಯಾದುದು. [4]ಎಲ್ಲಾ ಮಾನವರೂ ಸತ್ಯವನ್ನರಿತು ಜೀವೋದ್ಧಾರ
ಪಡೆಯಬೇಕೆಂಬುದೇ ದೈವೇಚ್ಛೆ. [5]ದೇವರು ಒಬ್ಬರೇ; ದೇವರನ್ನೂ ಮಾನವರನ್ನೂ ಒಂದುಗೂಡಿಸುವ
ಮಧ್ಯಸ್ಥರೂ ಒಬ್ಬರೇ; ಅವರೇ ಮಾನವರಾಗಿರುವ ಕ್ರಿಸ್ತಯೇಸು. [6]ಇವರು ಎಲ್ಲರ ಉದ್ಧಾರಕ್ಕಾಗಿ ತಮ್ಮ
ಪ್ರಾಣವನ್ನೇ ಅರ್ಪಿಸಿದರು. ಸರ್ವರೂ ಉದ್ಧಾರವಾಗಬೇಕೆಂಬ ದೈವೇಚ್ಛೆಗೆ ಸೂಕ್ತ ಸಮಯದಲ್ಲಿ ಸಾಕ್ಷಿ
ನೀಡಿದರು. [7]ವಿಶ್ವಾಸ ಮತ್ತು ಸತ್ಯದ ಸಂದೇಶವನ್ನು ಸಾರುವುದಕ್ಕಾಗಿಯೇ ದೇವರು ನನ್ನನ್ನು
ಪ್ರೇಷಿತನನ್ನಾಗಿಯೂ ಯೆಹೂದ್ಯೇತರರಿಗೆ ಬೋಧಕನನ್ನಾಗಿಯೂ ನೇಮಕಮಾಡಿದರು. ನಾನು
ಹೇಳುತ್ತಿರುವುದು ಸುಳ್ಳಲ್ಲ, ಸತ್ಯಸ್ಯ ಸತ್ಯ.

8 ಪ್ರಾರ್ಥನೆ ಮಾಡುವ ಸ್ಥಳಗಳಲ್ಲೆಲ್ಲಾ ಪುರುಷರು ಕೋಪತಾಪವಿಲ್ಲದೆ, ಕೋಲಾಹಲವಿಲ್ಲದೆ
ಕರಗಳನ್ನೆತ್ತಿ ಭಕ್ತಿಪೂರ್ವಕವಾಗಿ ಪ್ರಾರ್ಥಿಸಬೇಕು ಎಂಬುದೇ ನನ್ನ ಅಪೇಕ್ಷೆ. [9]ಅಂತೆಯೇ, ಮಹಿಳೆಯರು,
ಸಭ್ಯತೆಯನ್ನು ಮೀರದೆ ಘನತೆ, ಗೌರವಕ್ಕೆ ಒಪ್ಪುವಂತಹ ಉಡುಪನ್ನು ಧರಿಸಿಕೊಳ್ಳಬೇಕು. [10]ಅವರು
ಮಿತಿಮೀರಿದ ಕೇಶಾಲಂಕಾರ, ಆಭರಣಾಲಂಕಾರ, ವಸ್ತ್ರಾಲಂಕಾರಗಳಿಂದ ತಮ್ಮನ್ನೇ ಶೃಂಗರಿಸಿಕೊಳ್ಳುವುದರ
ಬದಲು ದೈವಭಕ್ತೆಯರಾದ ಸ್ತ್ರೀಯರಿಗೆ ಲಕ್ಷಣವಾದ ಸತ್ಕಾರ್ಯಗಳಿಂದ ಅಲಂಕರಿಸಿಕೊಳ್ಳಲಿ. [11]ಮಹಿಳೆಯರು
ಮೌನದಿಂದಲೂ ನಮ್ರತೆಯಿಂದಲೂ ಧರ್ಮೋಪದೇಶವನ್ನು ಕಲಿಯಲಿ. [12]ಅವರು ಬೋಧನೆ
ಮಾಡುವುದಕ್ಕಾಗಲಿ, ಪುರುಷರ ಮೇಲೆ ಅಧಿಕಾರ ಚಲಾಯಿಸುವುದಕ್ಕಾಗಲಿ ನಾನು ಅನುಮತಿಸೆನು. ಅವರು
ಮೌನ ತಾಳಬೇಕು. [13]ಏಕೆಂದರೆ, ದೇವರು ಮೊದಲು ಆದಾಮನನ್ನು, ಅನಂತರ ಹವ್ವಳನ್ನು ಸೃಷ್ಟಿಸಿದರು.
[14]ಅಲ್ಲದೆ, ಮೊದಲು ವಂಚನೆಗೊಳಗಾಗಿ ದೇವರಿಗೆ ವಿರುದ್ಧ ಪಾಪಮಾಡಿದವಳು ಹವ್ವಳೇ ಹೊರತು
ಆದಾಮನಲ್ಲ. [15]ಮಹಿಳೆ ಸಚ್ಚರಿತಳಾಗಿದ್ದು ವಿಶ್ವಾಸ, ಪ್ರೀತಿ ಮತ್ತು ಪವಿತ್ರತೆಯಲ್ಲಿ ಪ್ರವರ್ಧಿಸಿದರೆ, ತನ್ನ
ತಾಯ್ತನದ ಮೂಲಕ ಸಂರಕ್ಷಣೆಯನ್ನು ಪಡೆಯುತ್ತಾಳೆ.

## ಧರ್ಮಾಧ್ಯಕ್ಷನ ಗುಣಲಕ್ಷಣಗಳು

**3** ಯಾರಾದರೂ ಧರ್ಮಾಧ್ಯಕ್ಷನಾಗಲು ಅಪೇಕ್ಷಿಸಿದರೆ, ಅಂಥವನು ಉತ್ತಮ ಸೇವೆಯನ್ನೇ
ಬಯಸುತ್ತಾನೆಂಬುದು ನಿಜ. [2]ಅಂಥವನು ನಿಂದಾರಹಿತನಾಗಿರಬೇಕು. ಏಕಪತ್ನಿ ಉಳ್ಳವನು,
ಸ್ವಸ್ಥಬುದ್ಧಿಯುಳ್ಳವನು, ಜಿತೇಂದ್ರಿಯನು, ಗೌರವಸ್ಥನು ಮತ್ತು ಅತಿಥಿ ಸತ್ಕಾರ ಮಾಡುವವನು ಆಗಿರಬೇಕು.
ಬೋಧಿಸುವುದರಲ್ಲಿ ಪ್ರವೀಣನಾಗಿರಬೇಕು. [3]ಅವನು ಕುಡುಕನು, ಕಲಹಪ್ರಿಯನು ಮತ್ತು
ಹೊಡೆದಾಡುವವನು ಆಗಿರಬಾರದು. ಶಾಂತನೂ ದಯಾವಂತನೂ ಹಣದ ವ್ಯಾಮೋಹ ಇಲ್ಲದವನೂ
ಆಗಿರಬೇಕು. [4]ತನ್ನ ಕುಟುಂಬವನ್ನು ಜವಾಬ್ದಾರಿಯುತವಾಗಿ ನಡೆಸುವವನೂ ಮಕ್ಕಳನ್ನು ಶಿಸ್ತಿನಲ್ಲಿ ಬೆಳೆಸಿ
ಅವರಿಂದ ಗೌರವವನ್ನು ಪಡೆದುಕೊಳ್ಳುವವನೂ ಆಗಿರಬೇಕು.

5 ತನ್ನ ಕುಟುಂಬವನ್ನೇ ಜವಾಬ್ದಾರಿಯುತವಾಗಿ ನಡೆಸಲು ತಿಳಿಯದವನು ದೇವರ ಸಭೆಯನ್ನು
ಹೇಗೆ ತಾನೇ ಪರಿಪಾಲಿಸಿಯಾನು? [6]ಆತನು ಹೊಸದಾಗಿ ಕ್ರೈಸ್ತಧರ್ಮವನ್ನು
ಅಂಗೀಕರಿಸಿದವನಾಗಿರಬಾರದು; ಇಲ್ಲದಿದ್ದರೆ ಅಹಂಕಾರದಿಂದ ಉಬ್ಬಿಕೊಂಡು ಸೈತಾನನಂತೆಯೇ ದಂಡನೆಗೆ
ಗುರಿಯಾದಾನು. [7]ಕ್ರೈಸ್ತರಲ್ಲದವರಿಂದಲೂ ಆತನು ಒಳ್ಳೆಯವನೆನಿಸಿಕೊಂಡಿರಬೇಕು. ಹೀಗಿದ್ದರೆ ಮಾತ್ರ
ನಿಂದೆಗೊಳಗಾಗದೆ ಸೈತಾನನ ಕುತಂತ್ರಗಳಿಂದ ದೂರವಿರಬಲ್ಲನು.

## ಸಭಾಸೇವಕರ ಸದ್ಗುಣಗಳು

8 ಸಭಾಸೇವಕರು ಸಜ್ಜನರಾಗಿರಬೇಕು. ಎರಡು ನಾಲಿಗೆಯುಳ್ಳವರೂ ಕುಡುಕರೂ ಲಾಭಕೋರರೂ
ಆಗಿರಬಾರದು. [9]ವಿಶ್ವಾಸದ ನಿಗೂಢ ರಹಸ್ಯಗಳನ್ನು ಶುದ್ಧ ಮನಸ್ಸಾಕ್ಷಿಯಿಂದ ಕಾಪಾಡಿಕೊಂಡು
ಬರುವವರಾಗಿರಬೇಕು. [10]ಇವರನ್ನು ಮೊದಲು ಪರೀಕ್ಷೆಗೊಳಪಡಿಸಬೇಕು. ಯಾವುದೇ ಕುಂದುಕೊರತೆ
ಕಂಡು ಬರದಿದ್ದಲ್ಲಿ, ಇವರನ್ನು ಸಭಾಸೇವಕರನ್ನಾಗಿ ನೇಮಿಸಬಹುದು. [11]ಅಂತೆಯೇ, ಸಭಾಸೇವಕಿಯರು
ಸಜ್ಜನೆಯರಾಗಿರಬೇಕು. ಚಾಡಿಮಾತುಗಳನ್ನು ಆಡುವವರೂ ಮದ್ಯಾಸಕ್ತರೂ ಆಗಿರದೆ ಎಲ್ಲ ವಿಷಯಗಳಲ್ಲಿ

ನಂಬಿಕಸ್ಥರಾಗಿರಬೇಕು. [12]ಸಭಾಸೇವಕರು ಏಕಪತ್ನಿಯುಳ್ಳವರಾಗಿದ್ದು ತಮ್ಮ ಮಕ್ಕಳನ್ನೂ ಕುಟುಂಬವನ್ನೂ ಜವಾಬ್ದಾರಿಯುತವಾಗಿ ನಡೆಸಿಕೊಂಡು ಹೋಗುವವರಾಗಿರಬೇಕು. [13]ನಿಷ್ಠೆಯಿಂದ ಸೇವೆಸಲ್ಲಿಸುವ ಸಭಾಸೇವಕರು ಒಳ್ಳೆಯ ಸ್ಥಾನಮಾನಗಳನ್ನು ಪಡೆಯುತ್ತಾರೆ; ಕ್ರಿಸ್ತ ಯೇಸುವಿನಲ್ಲಿ ಅವರಿಗಿರುವ ವಿಶ್ವಾಸವನ್ನು ಸಾರಲು ಧೈರ್ಯಸ್ಥೈರ್ಯವನ್ನು ಪಡೆಯುತ್ತಾರೆ.

## ಮಹಿಮಾನ್ವಿತ ಯೇಸುಕ್ರಿಸ್ತ

14 ನಾನು ನಿನ್ನ ಬಳಿಗೆ ಬೇಗನೆ ಬರುವೆನೆಂಬ ನಿರೀಕ್ಷೆಯಿಂದಲೇ ಈ ಪತ್ರವನ್ನು ಬರೆಯುತ್ತಿದ್ದೇನೆ. [15]ಒಂದು ವೇಳೆ ನಾನು ಬರುವುದು ತಡವಾದರೆ, ದೇವರ ಮಂದಿರದಲ್ಲಿ ಅಂದರೆ, ಜೀವಸ್ವರೂಪಿಯಾದ ದೇವರ ಸಭೆಯಲ್ಲಿ, ಹೇಗೆ ನಡೆದುಕೊಳ್ಳಬೇಕು ಎಂಬುದು ನಿನಗೆ ತಿಳಿಯಲೆಂದು ಇದನ್ನು ಬರೆದಿದ್ದೇನೆ. ಸಭೆಯು ಸತ್ಯಕ್ಕೆ ಸ್ತಂಭವೂ ಅಸ್ತಿವಾರವೂ ಆಗಿದೆ. [16]ನಿಜವಾಗಿಯೂ ನಮ್ಮ ಧರ್ಮದ ನಿಗೂಢಾರ್ಥ ಶ್ರೇಷ್ಠವಾದದ್ದು ಎಂಬುದು ನಿಸ್ಸಂದೇಹವಾದ ವಿಷಯ.

“ನರಮಾನವ ರೂಪದಲ್ಲಿ ಪ್ರತ್ಯಕ್ಷನಾಗಿ
ದೇವರಿಗೆ ಪ್ರಿಯನೆಂದು ಪವಿತ್ರಾತ್ಮನಿಂದ
  ಪ್ರಕಟಿತನಾಗಿ
ದೇವದೂತರಿಗೆ ಪ್ರದರ್ಶಿತವಾಗಿ
ಅನ್ಯಜನರಿಗೆ ಪ್ರಬೋಧಿತನಾಗಿ
ಜಗದಲ್ಲೆಲ್ಲೂ ವಿಶ್ವಾಸಪಡೆದವನಾಗಿ
ಸ್ವರ್ಗಕ್ಕೇರಿದಾತ ಮಹಿಮಾನ್ವಿತ
  ಯೇಸುಕ್ರಿಸ್ತ.

## ದುರ್ಮನಸ್ಸಿನ ದುರ್ಬೋಧಕರು

**4** ಮುಂಬರುವ ದಿನಗಳಲ್ಲಿ ಕೆಲವರು ವಂಚಿಸುವ ಆತ್ಮಗಳಿಗೆ ಬಲಿಬಿದ್ದು, ದುರಾತ್ಮಗಳ ದುರುಪದೇಶಗಳಿಗೆ ಕಿವಿಗೊಟ್ಟು ವಿಶ್ವಾಸಭ್ರಷ್ಟರಾಗುವರೆಂದು ಪವಿತ್ರಾತ್ಮ ಸ್ಪಷ್ಟವಾಗಿ ತಿಳಿಸಿದ್ದಾರೆ. [2]ಕಪಟಿಗಳು ದುರ್ಬೋಧನೆಗಳನ್ನು ಪ್ರಸರಿಸುತ್ತಾರೆ. ಬರೆಹಾಕಿದ ಚರ್ಮದಂತೆ ಅವರ ಮನಸ್ಸಾಕ್ಷಿಯು ಸುಟ್ಟುಹೋಗಿದೆ. [3]ಮದುವೆಯಾಗಬಾರದು, ಇಂತಿಂಥ ಆಹಾರವನ್ನು ಸೇವಿಸಬಾರದು ಎಂದು ಬೋಧಿಸುತ್ತಾರೆ. ಆದರೆ ಸತ್ಯವನ್ನು ಅರಿತು ಯಾರು ವಿಶ್ವಾಸಿಗಳಾಗಿದ್ದಾರೋ ಅಂಥವರು ಎಲ್ಲ ಆಹಾರ ಪದಾರ್ಥಗಳನ್ನು ಕೃತಜ್ಞತಾಸ್ತುತಿಯೊಡನೆ ಸೇವಿಸಲೆಂದೇ ದೇವರು ಅವುಗಳನ್ನು ಸೃಷ್ಟಿಸಿದ್ದಾರೆ. [4]ದೇವರು ಸೃಷ್ಟಿಸಿದ್ದೆಲ್ಲವೂ ಒಳ್ಳೆಯದೇ. ಅವರಿಗೆ ಸ್ತುತಿಸಲ್ಲಿಸಿ ಸ್ವೀಕರಿಸಿದ ಯಾವುದನ್ನೂ ತಿರಸ್ಕರಿಸಬೇಕಾಗಿಲ್ಲ. [5]ಏಕೆಂದರೆ, ದೇವರ ವಾಕ್ಯದಿಂದಲೂ ನಮ್ಮ ಪ್ರಾರ್ಥನೆಯಿಂದಲೂ ಅದು ಪಾವನಗೊಳ್ಳುತ್ತದೆ.

## ಭಕ್ತಿಸಾಧನೆಯಿಂದ ಮುಕ್ತಿ

6 ಈ ವಿಷಯಗಳನ್ನೆಲ್ಲಾ ಇತರ ಸಹೋದರರಿಗೆ ನೀನು ವಿವರಿಸುವವನಾದರೆ, ನೀನು ಕ್ರಿಸ್ತಯೇಸುವಿನ ಯೋಗ್ಯ ದಾಸನಾಗುವೆ. ನೀನು ಅನುಸರಿಸುತ್ತಾ ಬಂದಿರುವ ಸದ್ಬೋಧನೆಯಿಂದಲೂ ವಿಶ್ವಾಸದಿಂದಲೂ ಆಧ್ಯಾತ್ಮಿಕ ಪೋಷಣೆಯನ್ನು ಪಡೆಯುವೆ. [7]ಪ್ರಾಪಂಚಿಕ ಹಾಗೂ ತಿರುಳಿಲ್ಲದ ಕಟ್ಟುಕತೆಗಳನ್ನು ತಳ್ಳಿಬಿಟ್ಟು, ನಿನ್ನ ಭಕ್ತಿಯನ್ನು ವೃದ್ಧಿಮಾಡಿಕೋ. [8]ಅಂಗಸಾಧನೆಯು ಸ್ವಲ್ಪ ಮಟ್ಟಿಗೆ ಪ್ರಯೋಜನಕರವಾದುದು; ಭಕ್ತಿಸಾಧನೆಯಾದರೋ ಎಲ್ಲಾ ದೃಷ್ಟಿಯಿಂದಲೂ ಪ್ರಯೋಜನಕರ ವಾದುದು; ಭಕ್ತಿಸಾಧನೆಯಿಂದ ಇಹಪರಗಳೆರಡರಲ್ಲೂ ನಿತ್ಯಜೀವವನ್ನು ಪಡೆಯುವ ಭರವಸೆ ನಮಗಿದೆ. [9]ಈ ಉಪದೇಶ ಸತ್ಯವಾದುದು ಹಾಗೂ ನಂಬಲರ್ಹವಾದುದು; ಎಲ್ಲರ ಅಂಗೀಕಾರಕ್ಕೂ ಯೋಗ್ಯವಾದುದು. [10]ಸಕಲ

ಮಾನವರ, ವಿಶೇಷವಾಗಿ ಕ್ರೈಸ್ತವಿಶ್ವಾಸಿಗಳ, ಉದ್ಧಾರಕರಾದ ಜೀವಸ್ವರೂಪ ದೇವರಲ್ಲಿಯೇ ನಾವು
ಭರವಸೆಯಿಟ್ಟಿದ್ದೇವೆ; ಅದಕ್ಕಾಗಿಯೇ ನಾವು ಹೋರಾಡುತ್ತೇವೆ ಹಾಗೂ ಶ್ರಮಿಸುತ್ತೇವೆ.
11 ಈ ಅಂಶಗಳನ್ನು ಆಜ್ಞಾಪಿಸಿ ಬೋಧಿಸು. 12ನೀನಿನ್ನೂ ಯುವಕನೆಂದು ನಿನ್ನನ್ನು ತಾತ್ಸಾರ
ಮಾಡುವುದಕ್ಕೆ ಯಾರಿಗೂ ಅವಕಾಶ ಕೊಡಬೇಡ. ನಿನ್ನ ನಡೆನುಡಿ, ಪ್ರೀತಿ ವಿಶ್ವಾಸ ಹಾಗೂ ಪರಿಶುದ್ಧತೆಯ
ವಿಷಯದಲ್ಲಿ ವಿಶ್ವಾಸಿಗಳಿಗೆಲ್ಲರಿಗೂ ನೀನೇ ಆದರ್ಶಪ್ರಾಯನಾಗಿರು. 13ನಾನು ಬರುವವರೆಗೂ
ಪವಿತ್ರಗ್ರಂಥವನ್ನು ಪಠಿಸುವುದರಲ್ಲೂ ಪ್ರಬೋಧಿಸುವುದರಲ್ಲೂ ಉಪದೇಶಿಸುವುದರಲ್ಲೂ ಆಸಕ್ತನಾಗಿರು.
14ನಿನ್ನಲ್ಲಿರುವ ವರದಾನವನ್ನು ಅಲಕ್ಷಿಸಬೇಡ. ಸಭೆಯ ಹಿರಿಯರು ನಿನ್ನ ಮೇಲೆ ದೈವವಾಕ್ಯದ
ಉಚ್ಚಾರದೊಂದಿಗೆ ಹಸ್ತ ನಿಕ್ಷೇಪಮಾಡಿದಾಗ ಈ ವರವು ನಿನಗೆ ಲಭಿಸಿತಲ್ಲವೇ? 15ನಿನ್ನ ಆಧ್ಯಾತ್ಮಿಕ ಪ್ರಗತಿ
ಎಲ್ಲರಿಗೂ ಗೋಚರವಾಗುವಂತೆ ಈ ಕಾರ್ಯಸಾಧನೆಗಳಲ್ಲಿ ನಿರತನಾಗಿರು; ಇವುಗಳಲ್ಲೇ ಮಗ್ನನಾಗಿರು.
ಇದರಿಂದ ನಿನ್ನ ಮತ್ತು ನಿನ್ನ ಉಪದೇಶವನ್ನು ಕೇಳುವವರ ಜೀವೋದ್ಧಾರವನ್ನು ಸಾಧಿಸುವೆ.

**5** ಹಿರಿಯರನ್ನು ಗದರಿಸಬೇಡ; ಅವರನ್ನು ತಂದೆಯಂತೆ ಭಾವಿಸಿ ಗೌರವದಿಂದ ತಿಳುವಳಿಕೆ ನೀಡು.
ಯುವಕರೊಡನೆ ಸೋದರಭಾವನೆಯಿಂದ ವರ್ತಿಸು. 2ವೃದ್ಧೆಯರೊಡನೆ ಮಾತೃಭಾವನೆಯಿಂದ
ನಡೆದುಕೋ. ಯುವತಿಯರನ್ನು ಅಕ್ಕತಂಗಿಯರೆಂದು ಪರಿಗಣಿಸಿ ಪರಿಶುದ್ಧ ಭಾವನೆಯಿಂದ ನಡೆದುಕೋ.
3ದಿಕ್ಕಿಲ್ಲದ ವಿಧವೆಯರನ್ನು ಸಂರಕ್ಷಿಸು. 4ವಿಧವೆಯಾದವಳಿಗೆ ಮಕ್ಕಳಾಗಲಿ ಮೊಮ್ಮಕ್ಕಳಾಗಲಿ ಇದ್ದರೆ, ಆ
ಮಕ್ಕಳು ಮೊತ್ತಮೊದಲು ತಮ್ಮ ಸ್ವಂತ ಕುಟುಂಬಕ್ಕೆ ಸಹಾಯ ಮಾಡಬೇಕಾದುದು ಅವರ ಧಾರ್ಮಿಕ
ಕರ್ತವ್ಯವೆಂಬುದು ಅವರಿಗೆ ತಿಳಿದಿರಲಿ. ಹೀಗೆ ಅವರು ತಮ್ಮ ತಂದೆತಾಯಿಯರಿಗೆ ಪ್ರತ್ಯುಪಕಾರ
ಮಾಡಿದಂತಾಗುತ್ತದೆ. ಅಲ್ಲದೆ, ಇದು ದೇವರ ದೃಷ್ಟಿಯಲ್ಲಿ ಮೆಚ್ಚುಗೆ ಪಡೆದುದು. 5ದಿಕ್ಕಿಲ್ಲದೆ
ಒಬ್ಬಂಟಿಗಳಾಗಿರುವ ವಿಧವೆ ದೇವರ ಮೇಲೆ ಭರವಸೆಯಿಟ್ಟು ಹಗಲಿರುಳು ಪ್ರಾರ್ಥನೆಗಳಲ್ಲೂ
ವಿಜ್ಞಾಪನೆಗಳಲ್ಲೂ ನಿರತಳಾಗಿರುತ್ತಾಳೆ. 6ವಿಲಾಸಿಯಾದ ವಿಧವೆಯಾದರೋ ಬದುಕಿದ್ದರೂ ಸತ್ತಂತೆಯೇ.
7ವಿಧವೆಯರು ಯಾವ ದೋಷಾರೋಪಣೆಗೂ ಗುರಿಯಾಗದಂತೆ, ಅವರಿಗೆ ಈ ಆಜ್ಞೆಗಳನ್ನು ಕೊಡು.
8ಯಾರಾದರೂ ತನ್ನ ಸಂಬಂಧಿಕರನ್ನು, ವಿಶೇಷವಾಗಿ ಸ್ವಂತ ಕುಟುಂಬದವರನ್ನು ಸಂರಕ್ಷಿಸದೆ ಹೋದರೆ,
ಅಂಥವನು ವಿಶ್ವಾಸಭ್ರಷ್ಟನೂ ಅವಿಶ್ವಾಸಿಗಳಿಗಿಂತ ತುಚ್ಛನಾದವನೂ ಆಗಿದ್ದಾನೆ.
9 ಅರವತ್ತು ವರ್ಷಕ್ಕೆ ಕಡಿಮೆಯಿಲ್ಲದ ವಿಧವೆಯನ್ನು, ವಿಧವೆಯರ ಪಟ್ಟಿಗೆ ಸೇರಿಸಿಕೊಳ್ಳಬಹುದು.
ಅಂಥವಳು ಒಂದೇ ಸಾರಿ ಮದುವೆ ಆದವಳಾಗಿರಬೇಕು. 10ಆಕೆ ಮಕ್ಕಳನ್ನು ಯೋಗ್ಯವಾಗಿ
ಸಾಕಿಸಲಹಿದವಳೂ ಅತಿಥಿ ಸತ್ಕಾರ ಮಾಡಿದವಳೂ ಆಗಿರಬೇಕು. ಅಲ್ಲದೆ, ದೇವಜನರ ಪಾದಸೇವೆ
ಮಾಡಿದವಳೂ ಸಂಕಷ್ಟದಲ್ಲಿದ್ದವರಿಗೆ ಸಹಾಯ ಮಾಡಿದವಳೂ ಆಗಿರಬೇಕು. ಇಂಥಾ ಪುಣ್ಯಕಾರ್ಯಗಳನ್ನು
ಮಾಡಿ ಸತ್ಕ್ರಿಯೆಗಳಿಗೆ ಹೆಸರಾದವಳೂ ಆಗಿರಬೇಕು.
11 ಯೌವನಸ್ಥ ವಿಧವೆಯರನ್ನು ಆ ಪಟ್ಟಿಯಲ್ಲಿ ಸೇರಿಸಬೇಡ. ಏಕೆಂದರೆ, ಯೇಸುಕ್ರಿಸ್ತರಿಂದ
ವಿಮುಖರನ್ನಾಗಿಸುವ ಕಾಮನೆಗಳು ಇವರನ್ನು ಮರುಮದುವೆಗೆ ಹುರಿದುಂಬಿಸಬಹುದು. 12ಹೀಗೆ, ಅವರು
ಮೊದಲು ಮಾಡಿದ ವಾಗ್ದಾನವನ್ನು ಉಲ್ಲಂಘಿಸಿ ತೀರ್ಪಿಗೆ ಗುರಿಯಾಗುತ್ತಾರೆ. 13ಇದಲ್ಲದೆ ಅವರು
ಮನೆಮನೆಗಳನ್ನು ಸುತ್ತುತ್ತಾ ಅಲೆದಾಡುತ್ತಾ ಹರಟೆಮಲ್ಲರೂ ಸೋಮಾರಿಗಳೂ ಆಗಬಹುದು. ಇತರರ
ವಿಷಯಗಳಲ್ಲಿ ತಲೆಹಾಕಬಹುದು. 14ಆದ್ದರಿಂದ, ತರುಣಿ ವಿಧವೆಯರು ವಿವಾಹ ಮಾಡಿಕೊಂಡು, ಮಕ್ಕಳನ್ನು
ಹೆತ್ತು ಸಂಸಾರವನ್ನು ನಡೆಸುವುದೇ ಒಳ್ಳೆಯದೆಂದು ನನ್ನ ಭಾವನೆ. ಆಗ ನಮ್ಮನ್ನು ನಿಂದಿಸಲು
ವಿರೋಧಿಗಳಿಗೆ ಆಸ್ಪದವಿರುವುದಿಲ್ಲ. 15ಏಕೆಂದರೆ, ಈಗಾಗಲೇ ಕೆಲವು ವಿಧವೆಯರು ದಾರಿತಪ್ಪಿ ಸೈತಾನನನ್ನು
ಹಿಂಬಾಲಿಸಿದ್ದಾರೆ. 16ಕ್ರೈಸ್ತವಿಶ್ವಾಸಿಯಾದ ಒಬ್ಬ ಮಹಿಳೆಯ ಮನೆಯಲ್ಲಿ ವಿಧವೆಯರಿದ್ದರೆ, ಆಕೆಯೇ
ಅವರನ್ನು ಸಂರಕ್ಷಿಸಲಿ. ಅವರ ಪೋಷಣೆಯ ಹೊಣೆಯನ್ನು ಧರ್ಮಸಭೆ ವಹಿಸಿಕೊಳ್ಳುವುದು ತಪ್ಪುತ್ತದೆ.
ಆಗ ನಿಜವಾಗಿಯೂ ದಿಕ್ಕಿಲ್ಲದ ವಿಧವೆಯರಿಗೆ ಸಭೆ ನೆರವು ನೀಡಲು ಸಾಧ್ಯವಾಗುತ್ತದೆ.

## ಸಭಾಹಿರಿಯರ ಕರ್ತವ್ಯಗಳು

17 ಸರಿಯಾಗಿ ಆಡಳಿತವನ್ನು ನಿರ್ವಹಿಸುತ್ತಿರುವ ಸಭಾಹಿರಿಯರು, ವಿಶೇಷವಾಗಿ ಬೋಧನೆಯಲ್ಲೂ ಉಪದೇಶದಲ್ಲೂ ಶ್ರಮಿಸುತ್ತಿರುವವರು, ಇಮ್ಮಡಿ ಸಂಭಾವನೆಗೆ ಯೋಗ್ಯರು. [18]'ಕಣ ತುಳಿಯುವ ಎತ್ತಿನ ಬಾಯನ್ನು ಕಟ್ಟಬೇಡ' ಎಂದೂ, 'ಕಾರ್ಮಿಕನು ಕೂಲಿಗೆ ಅರ್ಹನು' ಎಂದೂ ಧರ್ಮಶಾಸ್ತ್ರ ಹೇಳುತ್ತದೆಯಲ್ಲವೇ? [19]ಸಭಾಹಿರಿಯರ ವಿರುದ್ಧ ಯಾರಾದರೂ ದೂರು ತಂದರೆ, ಇಬ್ಬರ ಅಥವಾ ಮೂವರ ಸಾಕ್ಷಿ ಇಲ್ಲದೆ ಅದನ್ನು ಲಕ್ಷ್ಯಕ್ಕೆ ತಂದುಕೊಳ್ಳಬೇಡ. [20]ಯಾರಾದರೂ ಪಾಪದಲ್ಲಿಯೇ ಮುಂದುವರಿಯುತ್ತಾ ಇದ್ದರೆ, ಅಂಥವರನ್ನು ಬಹಿರಂಗವಾಗಿಯೇ ಖಂಡಿಸು. ಇದು ಇತರರಿಗೂ ಎಚ್ಚರಿಕೆಯಾಗಿರಲಿ.

21 ದೇವರ ಸನ್ನಿಧಿಯಲ್ಲಿಯೂ ಕ್ರಿಸ್ತಯೇಸುವಿನ ಪ್ರಸನ್ನತೆಯಲ್ಲಿಯೂ ಹಾಗೂ ಆಯ್ಕೆಯಾದ ದೇವದೂತರ ಮುಂದೆಯೂ ನಾನು ನಿನಗೆ ಆಜ್ಞಾಪಿಸುವುದಿದು: ಪೂರ್ವಾಗ್ರಹದಿಂದಾಗಲಿ, ಪಕ್ಷಪಾತದಿಂದಾಗಲಿ ಏನೂ ಮಾಡಬೇಡ. [22]ದೇವರ ಸೇವೆಗೆಂದು ಅವಸರದಿಂದ ಯಾರ ಮೇಲೂ ಹಸ್ತನಿಕ್ಷೇಪಮಾಡಿ ದೀಕ್ಷೆನೀಡಬೇಡ. ಹಾಗೆ ಮಾಡಿದರೆ, ಅವರ ಪಾಪಗಳಲ್ಲಿ ನೀನೂ ಭಾಗಿಯಾಗುವೆ. ನೀನು ಪರಿಶುದ್ಧನಾಗಿರುವ ಹಾಗೆ ನೋಡಿಕೋ.

23 ಆಗಾಗ್ಗೆ ನೀನು ಅಸ್ವಸ್ಥನಾಗುವುದುಂಟು. ಆದ್ದರಿಂದ ಬರೀ ನೀರನ್ನು ಕುಡಿದರೆ ಸಾಲದು. ನಿನ್ನ ಜೀರ್ಣಶಕ್ತಿಯ ಸುಧಾರಣೆಗಾಗಿ ಸ್ವಲ್ಪ ದ್ರಾಕ್ಷಾರಸವನ್ನೂ ಸೇವಿಸು.

24 ಕೆಲವರ ಪಾಪಕೃತ್ಯಗಳು ತೀರ್ಪಿಗೆ ಮುಂಚೆಯೇ ಬಟ್ಟಬಯಲಾಗುತ್ತವೆ; ಇನ್ನು ಕೆಲವರ ಪಾಪಗಳು ಮರೆಯಾಗಿದ್ದು ಕ್ರಮೇಣ ಬೆಳಕಿಗೆ ಬರುತ್ತವೆ. [25]ಅಂತೆಯೇ, ಕೆಲವರ ಸತ್ಕಾರ್ಯಗಳು ಎಲ್ಲರಿಗೂ ಬೇಗನೆ ಗೋಚರವಾಗುತ್ತವೆ. ಇನ್ನು ಕೆಲವರ ಸತ್ಕಾರ್ಯಗಳು ಅಗೋಚರವಾಗಿದ್ದರೂ ಸದಾ ಗುಟ್ಟಾಗಿರಲಾರವು.

## ದಾಸ್ಯಧರ್ಮ

**6** ದಾಸ್ಯದಲ್ಲಿರುವವರು ತಮ್ಮ ಯಜಮಾನರನ್ನು ಎಲ್ಲಾ ವಿಧದಲ್ಲೂ ಗೌರವಿಸಬೇಕು. ಇಲ್ಲದಿದ್ದರೆ, ದೇವರ ಹೆಸರಿಗೂ ನಮ್ಮ ಬೋಧನೆಗೂ ಕಳಂಕವುಂಟಾಗುತ್ತದೆ. [2]ಒಂದು ವೇಳೆ ಯಜಮಾನರು ಕ್ರೈಸ್ತವಿಶ್ವಾಸಿಗಳಾಗಿದ್ದರೆ ತಮ್ಮ ಯಜಮಾನರು ಸಹೋದರ ವರ್ಗದವರು ಎಂದು ಉದಾಸೀನ ಮಾಡಬಾರದು. ಬದಲಿಗೆ ಹೆಚ್ಚಿನ ಉತ್ಸಾಹದಿಂದ ಸೇವೆ ಸಲ್ಲಿಸಬೇಕು. ಏಕೆಂದರೆ, ಅವರ ಸೇವೆಯ ಪ್ರಯೋಜನವನ್ನು ಪಡೆಯುತ್ತಿರುವ ಯಜಮಾನರು, ಕ್ರೈಸ್ತ ವಿಶ್ವಾಸಿಗಳೂ ಪ್ರೀತಿಗೆ ಪಾತ್ರರಾದವರು.

## ಭಕ್ತಿ ಮತ್ತು ತೃಪ್ತಿ

ಈ ವಿಷಯಗಳ ಬಗ್ಗೆ ಆಜ್ಞಾಪೂರ್ವಕವಾಗಿ ಬೋಧಿಸು. [3]ಯಾರಾದರೂ ನಮ್ಮ ಧಾರ್ಮಿಕ ಉಪದೇಶವನ್ನು ಅನುಸರಿಸದೆ, ಪ್ರಭು ಯೇಸುಕ್ರಿಸ್ತರ ನೈಜ ಬೋಧನೆಯನ್ನು ಒಪ್ಪಿಕೊಳ್ಳದೆ ಭಿನ್ನ ಬೋಧನೆಯನ್ನು ಮಾಡುವುದಾದರೆ, ಅಂಥವನು ಅಹಂಭಾವಿ ಹಾಗೂ ಅಜ್ಞಾನಿಯೇ ಸರಿ. [4]ಅಂಥವನಿಗೆ ಒಣ ವಾಗ್ವಾದಗಳಲ್ಲಿ ಮತ್ತು ಬರಡು ಮಾತುಗಳಲ್ಲಿ ಬಲು ಹಂಬಲ. ಇವುಗಳು ಅಸೂಯೆ, ಕಲಹ, ದೂಷಣೆ, ಅನುಮಾನ ಮತ್ತು ಕಚ್ಚಾಟಗಳಿಗೆ ಎಡೆಕೊಡುತ್ತವೆ. [5]ಮತಿಗೆಟ್ಟ ಅಂಥವರಲ್ಲಿ ಸತ್ಯವೆಂಬುದು ಇರದು. ಧಾರ್ಮಿಕ ಸೇವೆಯು ಧನಗಳಿಕೆಯ ಸಾಧನವೆಂದೇ ಇವರ ನಂಬಿಕೆ.

6 ಇರುವುದರಲ್ಲೇ ಸಂತೃಪ್ತನಾಗಿರುವವನು ಭಕ್ತಿಯಲ್ಲಿ ನಿಜಕ್ಕೂ ಶ್ರೀಮಂತನಾಗಿರುತ್ತಾನೆ. [7]ಹುಟ್ಟಿದಾಗ ನಾವು ಈ ಲೋಕಕ್ಕೆ ಏನನ್ನೂ ತರಲಿಲ್ಲ; ಸಾಯುವಾಗ ಏನನ್ನೂ ಕೊಂಡು ಒಯ್ಯುವುದಿಲ್ಲ. [8]ನಮಗೆ ಊಟ, ಬಟ್ಟೆ ಇದ್ದರೆ ಅಷ್ಟೇ ಸಾಕು. [9]ಐಶ್ವರ್ಯವಂತರಾಗಬೇಕೆಂದು ಆಶಿಸುವವರು ಅನೇಕ ಪ್ರಲೋಭನೆಗಳಿಗೆ ಒಳಗಾಗುತ್ತಾರೆ. ನಿರರ್ಥಕವೂ ಹಾನಿಕರವೂ ಆದ ಆಶಾಪಾಶಗಳಲ್ಲಿ ಸಿಕ್ಕಿಬೀಳುತ್ತಾರೆ. ಇಂಥ ದುರಾಶೆಗಳು ಮನುಷ್ಯರನ್ನು ಕೇಡಿಗೂ ವಿನಾಶಕ್ಕೂ ಒಯ್ಯುತ್ತವೆ. [10]ಹಣದ ವ್ಯಾಮೋಹವೇ ಎಲ್ಲಾ ಕೇಡುಗಳಿಗೂ ಮೂಲ.

ಹಣದ ವ್ಯಾಮೋಹದಿಂದಲೇ ಹಲವರು ವಿಶ್ವಾಸದಿಂದ ದೂರ ಸರಿದು, ತಮ್ಮ ಹೃದಯಗಳನ್ನು ಹಲತರದ ತಿವಿತಗಳಿಗೆ ಗುರಿ ಮಾಡುತ್ತಾರೆ.

## ಅಂತಿಮ ಆದೇಶ

11 ದೇವರ ಭಕ್ತನಾದ ನೀನು ಈ ಎಲ್ಲಾ ಕೇಡುಗಳಿಂದ ದೂರವಿರು. ದೇವರೊಡನೆ ಸತ್ಸಂಬಂಧ, ಭಕ್ತಿ, ವಿಶ್ವಾಸ, ಪ್ರೀತಿ, ಸ್ಥಿರಚಿತ್ತ, ಸಾತ್ವಿಕತೆ – ಇವೇ ಮೊದಲಾದ ಸದ್ಗುಣಗಳನ್ನು ಸಂಪಾದಿಸಲು ಪ್ರಯತ್ನಿಸು.
[12]ನಿತ್ಯಜೀವವೆಂಬ ಬಹುಮಾನವನ್ನು ಗಳಿಸಲು ವಿಶ್ವಾಸವೆಂಬ ಪಂದ್ಯದಲ್ಲಿ ಉತ್ತಮ ಓಟಗಾರನಾಗಿ ಓಡು. ಇದಕ್ಕಾಗಿಯೇ ದೇವರು ನಿನ್ನನ್ನು ಆರಿಸಿಕೊಂಡರೆಂಬುದನ್ನು ಮರೆಯಬೇಡ. ಈ ಗುರಿಯನ್ನು ಮುಂದಿಟ್ಟುಕೊಂಡೇ ನೀನು ಅನೇಕರ ಮುಂದೆ ವಿಶ್ವಾಸಪ್ರಮಾಣ ಮಾಡಿರುವೆ. [13]ಸಕಲ ಸೃಷ್ಟಿಗೂ
ಜೀವದಾತರಾದ ದೇವರ ಸನ್ನಿಧಿಯಲ್ಲಿ ಪೊಂತಿಯ ಪಿಲಾತನ ಮುಂದೆ ಸೂಕ್ತ ಸಾಕ್ಷಿ ನೀಡಿದ ಪ್ರಭು ಯೇಸುವಿನ ಸನ್ನಿಧಿಯಲ್ಲಿ ನಾನು ಆಜ್ಞಾಪಿಸುವುದೇನೆಂದರೆ: [14]ನಮ್ಮ ಪ್ರಭು ಯೇಸುಕ್ರಿಸ್ತರು ಪ್ರತ್ಯಕ್ಷರಾಗುವ
ತನಕ ಯಾವ ದೋಷಾರೋಪಣೆಗೂ ಎಡೆಗೊಡದೆ ಈ ಕಟ್ಟಳೆಗಳೆಲ್ಲವನ್ನೂ ಪ್ರಾಮಾಣಿಕತೆಯಿಂದ ಅನುಸರಿಸು:

[15–16]ಸೂಕ್ತಕಾಲದಲ್ಲಿ ಕ್ರಿಸ್ತಯೇಸುವನು
ಪ್ರತ್ಯಕ್ಷಪಡಿಸುವನು ಪರಮ ದೇವನು.
ಆ ದೇವನು ಪರಮಾನಂದನು
ಏಕಾಧಿಪತಿ, ರಾಜಾಧಿರಾಜನು
ಒಡೆಯರಿಗೆಲ್ಲಾ ಒಡೆಯನು, ಅಮರನು
ಅಗಮ್ಯ ಜ್ಯೋತಿಯಲ್ಲಿ ವಾಸಿಸುವವನು.
ಆತನನು ಕಂಡವರಾರೂ ಇಲ್ಲ
ಕಾಣಬಲ್ಲವರಾರೂ ಇಲ್ಲ.
ಆತನೊಬ್ಬನಿಗೆ ಮಹಿಮೆಯೂ
ಗೌರವವೂ ಪ್ರಭುತ್ವವೂ
ಸಲ್ಲಲಿ ಎಂದೆಂದಿಗೂ, ಆಮೆನ್.

17 ಈ ಲೋಕದ ಐಶ್ವರ್ಯವಂತರು ಅಹಂಕಾರಿಗಳಾಗಬಾರದೆಂದು ಎಚ್ಚರಿಸು. ಅವರು ಅಳಿದು ಹೋಗುವ ಆಸ್ತಿಯ ಮೇಲೆ ಭರವಸೆ ಇಡದೆ, ನಮ್ಮ ಸಂತೋಷಕ್ಕಾಗಿ ಸಮಸ್ತವನ್ನೂ ಧಾರಾಳವಾಗಿ ದಯಪಾಲಿಸುವ ದೇವರಲ್ಲೇ ಭರವಸೆಯಿಡುವಂತೆ ಅವರಿಗೆ ಆಜ್ಞಾಪಿಸು. [18]ಅವರು ಸದ್ಗುಣಶೀಲರಾಗಬೇಕು,
ಸತ್ಕಾರ್ಯಗಳನ್ನು ಮಾಡುವುದರಲ್ಲಿ ಶ್ರೀಮಂತರಾಗಿರಬೇಕು. ದಾನಶೀಲರೂ ಇತರರೊಂದಿಗೆ ಪಾಲು ಹಂಚಿಕೊಳ್ಳುವವರೂ ಪರೋಪಕಾರಿಗಳೂ ಆಗಿರಬೇಕು. [19]ಹೀಗೆ, ಅವರು ತಮ್ಮ ಭವಿಷ್ಯ ಜೀವನಕ್ಕೆ
ಭದ್ರವಾದ ಬುನಾದಿಯಾಗಬಲ್ಲ ನಿಧಿಯನ್ನು ಕೂಡಿಸಿಕೊಳ್ಳಬೇಕೆಂದು ವಿಧಿಸು. ಆಗ ಅವರು ಶಾಶ್ವತ ಜೀವವನ್ನು ಪಡೆಯುವರು.

20 ಪ್ರಿಯ ತಿಮೊಥೇಯನೇ, ನಿನ್ನ ವಶಕ್ಕೆ ಕೊಡಲಾಗಿರುವ ಸದ್ಬೋಧನೆಯನ್ನು ಸುರಕ್ಷಿತವಾಗಿ ಕಾಪಾಡಿಕೋ. ಪ್ರಾಪಂಚಿಕ ವ್ಯರ್ಥ ಸಂಭಾಷಣೆಗಳಿಂದಲೂ 'ಜ್ಞಾನಿ'ಗಳೆಂದು ತಪ್ಪಾಗಿ ಕೊಚ್ಚಿಕೊಳ್ಳುವವರ ವಾಗ್ವಾದಗಳಿಂದಲೂ ದೂರವಿರು. [21]ಕೆಲವರು ಇಂಥ ಕಪಟಜ್ಞಾನವನ್ನು ಅವಲಂಬಿಸಿ ವಿಶ್ವಾಸವನ್ನೇ
ಕಳೆದುಕೊಂಡಿದ್ದಾರೆ.

ದೇವರ ಅನುಗ್ರಹ ನಿಮ್ಮಲ್ಲಿರಲಿ !